# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1042(1256). |
| ಸದಸ್ಯರ ಹೆಸರು | : | ಶ್ರೀ ಎನ್ ಎಸ್ ಭೋಸರಾಜು (ವಿಧಾನ ಸಭೆಯಿಂದ ಚುನಾಯಿತರಾದವರು). |
| ಉತ್ತರಿಸಬೇಕಾದ ದಿನಾಂಕ | : | 17-03-2020. |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣ ಹಾಗೂ ಸಿರವಾರ ಪಟ್ಟಣಗಳಲ್ಲಿ ಒಳಚರಂಡಿ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣಕ್ಕೆ ಒಳಚರಂಡಿ ಬದಲಾಗಿ Faecal Sludge Treatment ಘಟಕವನ್ನು (FSTP) ಸ್ಥಾಪಿಸಲು ಸರ್ಕಾರವು ದಿನಾಂಕ:03.12.2018ರಲ್ಲಿ ಅನುಮೋದನೆಯನ್ನು ನೀಡಿದ್ದು, ಇದಕ್ಕೆ ಸಂಬಂಧಿಸಿದಂತೆ ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸಲು ಪೌರಾಡಳಿತ ನಿರ್ದೇಶನಾಲಯದಿಂದ ಕೇಂದ್ರಿಕೃತವಾದ ಟೆಂಡರ್ ಪ್ರಕ್ರಿಯೆ ಮೂಲಕ ಏಜೆನ್ಸಿಗಳನ್ನು ಆಯ್ಕೆಮಾಡಲಾಗಿದೆ ಹಾಗೂ FSTP ಯೋಜನೆಯ ಎರಡನೇ ಹಂತದ ಕಾರ್ಯಕ್ರಮದಲ್ಲಿ ಸಿರವಾರ ಪಟ್ಟಣದಲ್ಲಿ ಕಲ್ಮಷ ತ್ಯಾಜ್ಯ ಸಂಸ್ಕರಿಸುವ ಘಟಕವನ್ನು (Faecal Sludge Treatment Plant) ಸ್ಥಾಪಿಸಲು ಉದ್ದೇಶಿಸಲಾಗಿದೆ. |
| ಆ) | ರಾಯಚೂರು ಜಿಲ್ಲೆಯ ಸಿರವಾರ ಪಟ್ಟಣಕ್ಕೆ ಗಣೆಕಲ್ ಸಮತೋಲನ ಜಲಾಶಯ (Balancing Reservoir) ದಿಂದ ಕುಡಿಯುವ ನೀರು ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇದಕ್ಕೆ ತಗಲುವ ಅಂದಾಜು ಮೊತ್ತ ಎಷ್ಟು? | ರಾಯಚೂರು ಜಿಲ್ಲೆಯ ಸಿರವಾರ ಪಟ್ಟಣಕ್ಕೆ ಗಣೆಕಲ್ ಸಮತೋಲನ ಜಲಾಶಯ (Balancing Reservoir) ದಿಂದ ಕುಡಿಯುವ ನೀರು ಸರಬರಾಜು ಮಾಡುವ ಸುಮಾರು ರೂ. 6500.00 ಲಕ್ಷಗಳ ಅಂದಾಜು ಪಟ್ಟಿಗೆ ಸಂಬಂಧಿಸಿದಂತೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ನಅಇ 108 ಸಿಎಸ್ಎಸ್ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಹಾಗೂ
ರೇಷ್ಮೆ ಸಚಿವರು